## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 594 |
| **ಮಾನ್ಯ ಸದಸ್ಯರ ಹೆಸರು** | : | ಡಾ: ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : | 13.12.2024 |
| **ಉತ್ತರಿಸುವ ಸಚಿವರು** | : | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾವೇರಿ ಜಿಲ್ಲೆಯ ಗುತ್ತಲದ ಹತ್ತಿರ ತುಂಗಭದ್ರಾ ನದಿಯ ತೀರದಲ್ಲಿ ಚೌಡದಾನಪುರದಲ್ಲಿ "ನಿಜಶರಣ ಅಂಬಿಗರ ಚೌಡಯ್ಯ" ಶರಣರ ಸಮಾಧಿಯ ಗದ್ದುಗೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಈ ಸಮಾಧಿಯ ಗದ್ದುಗೆ ದುಸ್ಥಿತಿಯಲ್ಲಿರುವುದು ನಿಜವೇ; | ನಿಜಶರಣ ಅಂಬಿಗರ ಚೌಡಯ್ಯನವರ ಸಮಾಧಿಯು ಅರಕ್ಷಿತ ಸ್ಮಾರಕವಾಗಿದ್ದು, ಸದರಿ ಸ್ಮಾರಕವು ಸುಸ್ಥಿತಿಯಲ್ಲಿರುತ್ತದೆ. |
| ಇ) | ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯನ್ನು ಕೂಡಲಸಂಗಮ ಬಸವಣ್ಣನವರ ಗದ್ದುಗೆಯನ್ನು ಕಟ್ಟಿದ ಮಾದರಿಯಲ್ಲಿ ಕಟ್ಟಡ ನಿರ್ಮಾಣ ಮಾಡಿ ಜನರಿಗೆ ದರ್ಶನ ಪಡೆಯಲು ಅನುಕೂಲ ಮಾಡಲು ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆಯೇ? | ಹಾವೇರಿ ಜಿಲ್ಲೆಯ ಗುತ್ತಲದ ಹತ್ತಿರ ತುಂಗಭದ್ರಾನದಿಯ ತೀರದಲ್ಲಿ ಚೌಡದಾನಪುರದಲ್ಲಿ ಶ್ರೀಮುಕ್ತಿನಾಥೇಶ್ವರ ದೇವಾಲಯವು ರಾಷ್ಟ್ರೀಯ ಸಂರಕ್ಷಿತ ಸ್ಮಾರಕವಾಗಿದ್ದು, ಕೇಂದ್ರ ಸಂಸ್ಕೃತಿ ಮಂತ್ರಾಲಯದ ಅಧೀನದಲ್ಲಿರುವ ಭಾರತೀಯ ಪುರಾತತ್ವ ಸರ್ವೇಕ್ಷಣೆಯ ವ್ಯಾಪ್ತಿಯಲ್ಲಿರುತ್ತದೆ. ಈ ದೇವಾಲಯದ 15 ಮೀಟರ್ ದೂರದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಸಮಾಧಿಯಿದ್ದು, ಇದ್ದು ನಿಷೇಧಿತ ಪ್ರದೇಶವಾಗಿರುತ್ತದೆ. ಇಲ್ಲಿ ಕೂಡಲ ಸಂಗಮದ ಬಸವಣ್ಣನವರ ಗದ್ದುಗೆಯನ್ನು ಕಟ್ಟಿದ ಮಾದರಿಯಲ್ಲಿ ಕಟ್ಟಡ ನಿರ್ಮಾಣಕ್ಕೆ ಭಾರತೀಯ ಪುರಾತತ್ವ ಸರ್ವೇಕ್ಷಣೆಯ ಅನುಮತಿಯನ್ನು ಪಡೆದು ಕ್ರಮವಹಿಸಬೇಕಾಗಿದೆ.<br><br>ಸದರಿ ಪ್ರದೇಶವು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ವ್ಯಾಪ್ತಿಯಲ್ಲಿ ಇರುತ್ತದೆ. ಆದ್ದರಿಂದ, ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯನ್ನು ಕೂಡಲಸಂಗಮ ಬಸವಣ್ಣನವರ ಗದ್ದುಗೆಯನ್ನು ಕಟ್ಟಿದ ಮಾದರಿಯಲ್ಲಿ ಕಟ್ಟಡ ನಿರ್ಮಾಣ ಮಾಡಲು ಕಷ್ಟಸಾಧ್ಯವಾಗಿರುತ್ತದೆ |

**ಸಂಖ್ಯೆ:ಟಿಓಆರ್ 304 ಟಿಡಿವಿ 2024**

**(ಎಚ್.ಕೆ. ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು